BNMDC/04/2021-22
22.04.2021

(12)

# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/2020-21

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 20-03-2021

## ಅಧಿಸೂಚನೆ

ವಿಷಯ : 2020-21ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.
ಉಲ್ಲೇಖ: ಕುಲಪತಿಯವರ ಅನುಮೋದನೆ ದಿನಾಂಕ: 19-03-2021

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2020-21ನೇ ಸಾಲಿಗೆ ಬೆಂಗಳೂರಿನ ಭಾಗೀರತಿ ಬಾಯಿ ನಾರಯಣ್ ರಾವ್ ಮಾನೇ ಕಾಲೇಜು, ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ. |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ* | 150 (ನೂರ ಐವತ್ತು) |
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ* | 090 (ತೊಂಭತ್ತು) |
| ಎಂ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |

*ಆಸ್ಟ್ರಿಕ್ ಗುರುತುಳ್ಳ ಕೋರ್ಸುಗಳು 2017-2018ನೇ ಶೈಕ್ಷಣಿಕ ಸಾಲಿನಿಂದ 2020-21ನೇ ಸಾಲಿನವರೆಗೆ ಶಾಶ್ವತ ಸಂಯೋಜನೆಯನ್ನು ಹೊಂದಿರುತ್ತವೆ. ವಿ.ವಿ. ಅಧಿಸೂಚನೆ ಸಂಖ್ಯೆ: ಎಸಿಎ-3/ಎ3/ಶಾ.ಸಂ./BNMDC/2017-2018 ದಿನಾಂಕ: 21-08-2017.

***ವಿ.ಸೂ:*** *2020-21ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.*
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

Principal Grade-I
B.N.M. Degree College
Banashankari 2nd Stage,
... 560 070.

7. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

8. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ, ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

14. 2021-22ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

15. *ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.*

16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

K. Jyothi 20/3/2024
ಕುಲಸಚಿವರು

ಗೆ,

ಪ್ರಾಂಶುಪಾಲರು,
ಭಾಗೀರಥಿ ಬಾಯಿ ನಾರಯಣ್ ರಾವ್ ಮಾನೇ ಕಾಲೇಜು,
ಬನಶಂಕರಿ 2ನೇ ಹಂತ, ಬೆಂಗಳೂರು -560 070.

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವ ವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1 [Aca-III:-1-2020-21]

Principal Grade-I
B.N.M. Degree College
Banashankari 2nd Stage
Bangalore-560 070.

B.N.M Degree College

Starting of M.Com Course

Date: 03.09.2018

| | Steps to be followed | Status |
|---|---|---|
| Step 1 | Application to Bangalore University | Applied on 30.11.2017 |
| Step 2 | Inspection by Local Inspection Committee | Inspection held on 11.03.2018 |
| Step 3 | Recommendation by the LIC Chairman to Bangalore University | Done |
| Step 4 | Syndicate approval | Meeting not held due to election code of conduct |
| Step 5 | Academic Council approval | Meeting not held due to election code of conduct |
| Step 6 | Government approval | 20.03.2021 |

Principal Grade-I
B.N.M. Degree College
Banashankari 2nd Stag
Bangalore-560 070

# B.N.M DEGREE COLLEGE

27th cross, 17th Main Road, Banashankari II Stage, Bangalore – 560070

## *Inauguration of*
## *Post Graduation Program- M.Com*

**Chief Guest**

Sri. Ashok R.Maanay
Joint Secretary
BNMEI

Date: 19th September 2018

**Venue:** Bhageerathi Auditorium

**Day: Wednesday**
**Time: 10.10a.m**

**Dr.B.N.Srinivasa Rao Maney**
Principal, BNM Degree College

**Staff & Students**
BNM Degree College

Principal Grade-I
B.N.M. Degree College
Banashankari 2nd Stage,
Bangalore-560 070.